RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**



| | | |
|---|---|---|
| ಭಾಗ– **IVA** | ಬೆಂಗಳೂರು, ಗುರುವಾರ, ಮಾರ್ಚ್ ೩೧, ೨೦೧೬ (ಚೈತ್ರ ೧೧, ಶಕ ವರ್ಷ ೧೯೩೭) | ನಂ. ೫೮೦ |
| **Part– IVA** | **Bengaluru, Thursday, March 31, 2016 (Chaitra 11 Shaka Varsha 1937)** | **No. 580** |



ಸಂಸದೀಯ ವ್ಯವಹಾರಗಳ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 18 ಶಾಸನ 2016, ಬೆಂಗಳೂರು, ದಿನಾಂಕ:31.03.2016.**

ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2016ಕ್ಕೆ 2016ರ ಮಾರ್ಚ್ ತಿಂಗಳ ಮೂವತ್ತೊಂದನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2016ರ ಕರ್ನಾಟಕ ಅಧಿನಿಯಮ ಸಂಖ್ಯೆ: 06 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2016ರ ಕರ್ನಾಟಕ ಅಧಿನಿಯಮ ಸಂಖ್ಯೆ: 06**

(2016ರ ಮಾರ್ಚ್ ಮೂವತ್ತೊಂದನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ಅಧಿನಿಯಮ, 2016**

(2016ರ ಮಾರ್ಚ್ ಮೂವತ್ತೊಂದನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ನ್ನು (2004ರ ಕರ್ನಾಟಕ ಅಧಿನಿಯಮ 32) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ಅಧಿನಿಯಮ, 2016 ಎಂದು ಕರೆಯತಕ್ಕದ್ದು.

(2) ಇದು 2016ರ ಏಪ್ರಿಲ್ ಒಂದನೇ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. 10ನೇ ಪ್ರಕರಣದ ತಿದ್ದುಪಡಿ.–** ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ರ (2004ರ ಕರ್ನಾಟಕ ಅಧಿನಿಯಮ 32) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 10ನೇ ಪ್ರಕರಣದಲ್ಲಿ,–

(i) (3)ನೇ ಉಪಪ್ರಕರಣದಲ್ಲಿ, 2015ರ ಏಪ್ರಿಲ್ ಒಂದನೇ ದಿನಾಂಕದಿಂದ ಜಾರಿಗೆ ಬರುವಂತೆ ಈ ಮುಂದಿನ ಪದಗಳನ್ನು ಬಿಟ್ಟುಬಿಡಲಾಗಿದೆಯೆಂದು ಭಾವಿಸತಕ್ಕದ್ದು;